**ಸಾಕ್ಷಿಯನ್ನು ದಿಃ 06.10.2025 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ 1 ನೇ ಎದುರುದಾರರ ಪರ ಶ್ರೀ ಬಿ.ಪಿ.ಡಿ ವಕೀಲರಿಂದಃ**

ನನ್ನ ಯಜಮಾನರು ಕೆಲಸ ಮಾಡುತ್ತಿದ್ದ ಬಗ್ಗೆ ಐ.ಡಿ. ಕಾರ್ಡ್ ಅನ್ನು ಕೊಟ್ಟಿಲ್ಲ. ಸಾಕ್ಷಿ ಮುಂದುವರೆದು ಕೊರೋನ ಅವಧಿಯಲ್ಲಿ ಕೊಟ್ಟಿದ್ದನ್ನು ಹಾಜರು ಪಡಿಸಿದ್ದೇನೆ ಎಂದು ಉತ್ತರಿಸಿರುತ್ತಾರೆ. ಕೆಲಸವನ್ನು ನನ್ನ ಯಜಮಾನರು 2020 ನೇ ಇಸವಿಯಲ್ಲಿ ಬಿಟ್ಟಿದ್ದಾರೆ ಎಂದರೆ ಸರಿಯಲ್ಲ. ಆದ ಕಾರಣ ಇತ್ತೀಚಿನ ಐ.ಡಿ. ಕಾರ್ಡ್ ಕೊಟ್ಟಿಲ್ಲ ಎಂದರೆ ಸರಿಯಲ್ಲ. ನನ್ನ ಯಜಮಾನರಿಗೆ ಸಂಬಂಧಿಸಿದ ಬ್ಯಾಂಕ್ ಪಾಸ್ ಪುಸ್ತಕ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. ಹಾಜರು ಪಡಿಸಿದ ದಾಖಲೆಗಳನ್ನು (ನಿಪಿ. 14) ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ಅದನ್ನು ಹೆಚ್ಚಿನ ಆದಾಯಕ್ಕಾಗಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು 9 ನೇ ತರಗತಿವರೆಗೆ ಓದಿರುತ್ತೇನೆ. ಪೋಲೀಸ್ ದಾಖಲೆಗಳನ್ನು ಓದಿ ಕೇಳಿ ತಿಳಿದುಕೊಂಡಿರುತ್ತೇನೆ. ನಿಪಿ. 3 ರಿಂದ 6 ದಾಖಲೆಗಳನ್ನು ಓದಿ ತಿಳಿದುಕೊಂಡಿದ್ದೇನೆ. ಮೇಲ್ಕಂಡ ದಾಖಲೆಗಳ ಪ್ರಕಾರ ನನ್ನ ಯಜಮಾನರ ತಪ್ಪಿನಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ. ನನ್ನ ಯಜಮಾನರು ಆ ದಿನ ಹೆಲ್ಮೆಟ್ ಧರಿಸಿಲ್ಲ ಎಂದರೆ ಸರಿಯಲ್ಲ. ಈ ಬಗ್ಗೆ ಮಹಜರ್ ನಲ್ಲಿ ನಮೂದಿಲ್ಲ ಎಂದರೆ ಸರಿಯಲ್ಲ. ಅಪಘಾತ ನನ್ನ ಯಜಮಾನರ ಬೇಜಾವಬ್ದಾರಿಯಿಂದ ಆಗಿದ್ದು ಹೆಲ್ಮೆಟ್ ಧರಿಸಿದ್ದರೆ ಅವರಿಗೆ ಪೆಟ್ಟಾಗುತ್ತಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಯಜಮಾನರ ಮಾಲೀಕರು ವಿಚಾರಣೆಗೆ ಕರೆಯಲು ತೊಂದರೆ ಇಲ್ಲ. ನನ್ನ ಯಜಮಾನರ ತಪ್ಪಿನಿಂದ ಅಪಘಾತ ಆಗಿರುವ ಕಾರಣ ನಾನು ಪರಿಹಾರಕ್ಕೆ ಅರ್ಹಳಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.